ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕ್ರೈಸ್ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ ಮೂಲಕ ನೇಮಕ ಮಾಡುವ ಬಗ್ಗೆ

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರಕ್ಷೇತ್ರ):-

101 (112) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ" (KREIS-ಕ್ರೈಸ್) ಅಧೀನದ ವಸತಿ ಶಾಲೆಗಳ ಸಹ ಶಿಕ್ಷಕರುಗಳಿಗೆ ಶಿಕ್ಷಣ ಇಲಾಖೆಗಳ ಸಹ ಶಿಕ್ಷಕರುಗಳ ಮಾದರಿಯಂತೆ ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠದ ಆದೇಶಾನುಸಾರ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ;

(ಆ) ಸದರಿ ವಸತಿ ಶಾಲೆಗಳಲ್ಲಿರುವ ಪ್ರಾಂಶುಪಾಲರ ಖಾಲಿಯಿರುವ ಹುದ್ದೆಗಳಿಗೆ ಸಹ ಶಿಕ್ಷಕರುಗಳನ್ನು ಕಳೆದ 10 ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಡ್ತಿ ನೀಡಲು ವಿಳಂಬವಾಗಿರುತ್ತಿರುವುದಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯಲ್ಲಿ ಸಹ ಶಿಕ್ಷಕರುಗಳನ್ನು ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು ?